ಅ) ಒಂದು ವೇಳೆ ಈ ಪ್ರಸ್ತಾವನೆಗೆ ಸಕ್ಕರೆ ನಿರ್ದೇಶಕರು ಯಾವುದೇ ಕ್ರಮಗಳನ್ನು ತೆಗೆದುಕೊಂಡಿರದೇ ಇದ್ದಲ್ಲಿ ಕಾರಣಗಳೇನು?

ಶ್ರೀ ವಿಶ್ವನಾಥ್ ಎಚ್. (ಸಹಕಾರ ಸಚಿವರು) :

ಅ) ಮಂಜೂರಾತಿ ನೀಡಿರುವುದಿಲ್ಲ.

ಆ) ಭದ್ರಾ ಸಹಕಾರಿ ಸಕ್ಕರೆ ಕಾರ್ಖಾನೆ (ನಿ), ದೊಡ್ಡಬಾತಿ ಇದರಲ್ಲಿ ಕೆಲವು ನೌಕರರಿಗೆ ಸರ್ಕಾರದ ಪೂರ್ವಾನುಮತಿಯಿಲ್ಲದೆ ಸರ್ಕಾರಿ ತುಟ್ಟಿಭತ್ಯೆ ನೀಡಿರುತ್ತದೆ. ಇದು ಗಮನಕ್ಕೆ ಬಂದ ಸಂದರ್ಭದಲ್ಲಿ ಸಕ್ಕರೆ ನಿರ್ದೇಶಕರು ಹೆಚ್ಚುವರಿ ತುಟ್ಟಿಭತ್ಯೆಯನ್ನು ಸಂಬಂಧಪಟ್ಟವರಿಂದ ವಸೂಲಿ ಮಾಡಲು ಕಾರ್ಖಾನೆಗೆ ದಿನಾಂಕ 18.4.2000ರಲ್ಲಿ ಸೂಚಿಸಿದ್ದರು. ಈ ಆದೇಶದ ವಿರುದ್ಧ ಸಂಬಂಧಪಟ್ಟ ಅಧಿಕಾರಿಗಳು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ. 21568-73/2000 ದಾಖಲಿಸಿದ್ದರು. ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ 18.9.2001ರಲ್ಲಿ ರಿಟ್ ಅರ್ಜಿಯನ್ನು ವಿಲೇವಾರಿ ಮಾಡುತ್ತಾ, ಹೆಚ್ಚುವರಿ ತುಟ್ಟಿಭತ್ಯೆ ಕೊಡುವ ಪ್ರಸ್ತಾವನೆ ಸರ್ಕಾರದ ಮುಂದು ಇದ್ದಲ್ಲಿ ಅದನ್ನು ಪರಿಗಣಿಸಬಹುದಾಗಿರುತ್ತದೆಂದು ತೀರ್ಪು ನೀಡಿತ್ತು. ಈ ತೀರ್ಪಿನ ನಂತರ ಭದ್ರಾ ಸಹಕಾರಿ ಸಕ್ಕರೆ ಕಾರ್ಖಾನೆಯ 6 ಮಂದಿ ಅಧಿಕಾರಿಗಳಿಗೆ ಸರ್ಕಾರಿ ತುಟ್ಟಿಭತ್ಯೆ ನೀಡಿರುವುದಕ್ಕೆ ಸರ್ಕಾರವು ಘಟನೋತ್ತರ ಅನುಮತಿ ನೀಡಿರುತ್ತದೆ.

ಮಹಾರಾಷ್ಟ್ರದಲ್ಲಿ ಚಿತ್ರಿ ನದಿಯಿಂದ ಹಿರಣ್ಯಕೇಶಿ ನದಿಗೆ ನೀರು

1623 (1795) ಶ್ರೀ ಅಪ್ಪಯ್ಯಗೌಡ ಬಸಗೌಡ ಪಾಟೀಲ್ (ಸಂಕೇಶ್ವರ್) ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯ ಹಿರಣ್ಯಕೇಶಿ ನದಿಗೆ ಬೇಸಿಗೆ ತಿಂಗಳುಗಳಲ್ಲಿ ಮಹಾರಾಷ್ಟ್ರದ ಚಿತ್ರಿ ನದಿಯಿಂದ ನೀರು ಬಿಡುವ ಬಗ್ಗೆ ಸರ್ಕಾರವು ಕೈಗೊಂಡ ಕ್ರಮಗಳೇನು;

ಆ) ಕ್ರಮ ಕೈಗೊಳ್ಳದಿದ್ದಲ್ಲಿ, ಯಾವಾಗ ಕೈಗೊಳ್ಳಲಾಗುವುದು;

ಇ) ಈ ಸಂಬಂಧದಲ್ಲಿ ಪ್ರಸ್ತಾವನೆ ಸಲ್ಲಿಸಿದ್ದಲ್ಲಿ, ವಿವರಗಳನ್ನು ಒದಗಿಸುವುದು?

ಶ್ರೀ ಎಚ್.ಕೆ. ಪಾಟೀಲ್ (ಜಲ ಸಂಪನ್ಮೂಲ ಸಚಿವರು) :

ಅ) ಬೆಳಗಾವಿ ಜಿಲ್ಲೆಯ ಹಿರಣ್ಯಕೇಶಿ ನದಿಗೆ ಮಳೆಗಾಲವನ್ನು ಹೊರತುಪಡಿಸಿ ಇತರೆ ತಿಂಗಳುಗಳಲ್ಲಿ ಮಹಾರಾಷ್ಟ್ರದ ಚಿತ್ರಿ ನದಿಯಿಂದ ನೀರನ್ನು ಬಿಡುವಂತೆ ಮಹಾರಾಷ್ಟ್ರ ಸರ್ಕಾರದೊಂದಿಗೆ ಒಪ್ಪಂದ ಮಾಡಿಕೊಳ್ಳಲು ಚರ್ಚಿಸಲಾಗುತ್ತಿದೆ. ಈ ಬಗ್ಗೆ ದಿ: 14.07.1992 ರಂದು ಮುಂಬೈನಲ್ಲಿ ಕರ್ನಾಟಕ ಮತ್ತು ಮಹಾರಾಷ್ಟ್ರ ರಾಜ್ಯದ ಜಲ ಸಂಪನ್ಮೂಲ ಸಚಿವರು, ಮಹಾರಾಷ್ಟ್ರ ರಾಜ್ಯದ ನೀರಾವರಿ ಸಚಿವರಿಗೆ ಒಪ್ಪಂದವನ್ನು ಅಂತಿಮಗೊಳಿಸುವ ಬಗ್ಗೆ ಮಹಾರಾಷ್ಟ್ರ ಸರ್ಕಾರವನ್ನು ಒತ್ತಾಯ ಪಡಿಸಲಾಗುತ್ತಿದೆ.

ಆ) ಉದ್ಭವಿಸುವುದಿಲ್ಲ.

ಇ) ಈ ಸಂಬಂಧದಲ್ಲಿ ಇತ್ತೀಚೆಗೆ ಕರ್ನಾಟಕ ಸರ್ಕಾರದಿಂದ ದಿ: 20.05.2002ರಲ್ಲಿ ಪತ್ರವನ್ನು ಬರೆದಿದ್ದು, ಚಿತ್ರಿ ಅಣೆಕಟ್ಟನ್ನು ಎತ್ತರಿಸುವಂತೆ ಒಪ್ಪಂದವನ್ನು ಮಾಡಿಕೊಳ್ಳುವ ಬಗ್ಗೆ ಮಹಾರಾಷ್ಟ್ರ ಸರ್ಕಾರವನ್ನು ಒತ್ತಾಯಿಸಲಾಗುತ್ತಿದೆ. ಶೀಘ್ರದಲ್ಲೇ ಎರಡು ರಾಜ್ಯಗಳ ನಡುವೆ ಇತರ ವಿಷಯಗಳಲ್ಲಿ ಮಾಡಿಕೊಂಡಿರುವ ಒಪ್ಪಂದಂತೆ ಈ ವಿಷಯದಲ್ಲೂ ಕೂಡಲೇ ಒಪ್ಪಂದ ಮಾಡಿಕೊಳ್ಳಲು ಸೂಕ್ತ ಕ್ರಮವನ್ನು ಕೈಗೊಳ್ಳಲಾಗುವುದು.